ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಖಾಸಗಿ ಶಾಲಾ ಶಿಕ್ಷಕರ ಬಗ್ಗೆ

ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

587(700) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಖಾಸಗಿ ಶಾಲೆಗಳ ಸುಮಾರು ನಲವತ್ತು ಸಾವಿರಕ್ಕೂ ಅಧಿಕ ಶಿಕ್ಷಕರು ಉದ್ಯೋಗ ಕಳೆದುಕೊಂಡು ಬೀದಿ ಪಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇವರ ಜೀವನೋಪಾಯಕ್ಕೆ ಸರ್ಕಾರ ನೀಡಿದ ಪರಿಹಾರವೇನು; ಹಾಗೂ ಕೈಗೊಂಡ ಕ್ರಮಗಳೇನು;

(ಆ) ರಾಜ್ಯದ ಸಾವಿರಾರು ಖಾಸಗಿ ಶಾಲಾ ಶಿಕ್ಷಕರು ಈಗ ದಿನಗೂಲಿ ಕಾರ್ಮಿಕರಾಗಿ ಜೀವನ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇವರಿಗೆ ಪರ್ಯಾಯ ವ್ಯವಸ್ಥೆ ಏನು;

(ಇ) ಸರ್ಕಾರ ಡಿಜಿಟಲ್ ಇಂಡಿಯಾ ಮೂಲಕ ಶಿಕ್ಷಕರಿಗೆ ಕಂಪ್ಯೂಟರ್ ಸೇರಿದಂತೆ ಅಗತ್ಯ ತಾಂತ್ರಿಕ ಮೂಲ ಸೌಕರ್ಯಗಳನ್ನು ಒದಗಿಸಿಲ್ಲದಿದ್ದರೂ ಅವರಿಗೆ ಆನ್‌ಲೈನ್ ತರಗತಿಗಳನ್ನು ನಡೆಸಲು ಕೇಂದ್ರವು ಒತ್ತಾಯ ಏರುತ್ತಿರುವುದು ಸರಿಯೇ?

(ಈ) ಲಾಕ್‌ಡೌನ್ ನಂತರ ಅನೇಕ ಖಾಸಗಿ ಶಾಲೆಗಳು ಮುಚ್ಚಿರುವುದರಿಂದ ಸಾವಿರಾರು ಶಿಕ್ಷಕರು ಉದ್ಯೋಗಕ್ಕಾಗಿ ಅಲೆದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಯಾವ ಕ್ರಮಗಳನ್ನು ಕೈಗೊಂಡಿದೆ;

(ಉ) ಬೆಂಗಳೂರಿನ 11 ಸಾವಿರ ಶಾಲಾ ಬಸ್‌ಗಳು ಸೇರಿದಂತೆ ರಾಜ್ಯದಿಂದ ಸುಮಾರು 15 ಸಾವಿರ ಶಾಲಾ ಬಸ್‌ಗಳು ಕಾರ್ಯನಿರ್ವಹಿಸದೆ ಶಾಲಾ ಬಸ್ ಡ್ರೈವರ್‌ಗಳು ಕೆಲಸ ಕಳೆದುಕೊಂಡಿದ್ದು ಇವರಿಗೆ ಯಾವ ಪರಿಹಾರ ನೀಡಲಾಗಿದೆ?